ಆ) ಇದರಿಂದಾಗಿ, ಸಾರ್ವಜನಿಕರು, ಆತಂಕಕ್ಕೆ ಒಳಗಾಗಿರುವುದನ್ನು ಸರ್ಕಾರವು ಮನಗಂಡಿದೆಯೇ,

ಇ) ಸೆಕ್ಷನ್ 45 (ಬಿ) ಅನ್ನು ಪರಿಷ್ಕರಿಸಿ ವೈಜ್ಞಾನಿಕವಾಗಿ ಆಸ್ತಿ ಮೌಲ್ಯ ಮತ್ತು ತೆರಿಗ ನಿರ್ಧಾರಿಸುವ ಪದ್ಧತಿಯನ್ನು ರಾಜ್ಯದ ನಗರ ಹಾಗೂ ಪಟ್ಟಣ ಪ್ರದೇಶಗಳಲ್ಲಿ ಜಾರಿಗೆ ತರಲು ಸರ್ಕಾರವು ಯಾವ ಕ್ರಮಗಳನ್ನು ಕೈಗೊಂಡಿದೆ?

ಶ್ರೀ ಡಿ ಕೆ ಶಿವಕುಮಾರ್ (ನಗರಾಭಿವೃದ್ಧಿ ಸಚಿವರು)

ಅ) ಬಂದಿದೆ

ಆ) ಹೌದು

ಇ) ಈಗಾಗಲೇ ಕಂದಾಯ ಇಲಾಖೆಯಲ್ಲಿ ಕರ್ನಾಟಕ ಮುದ್ರಾಂಕ ಕಾಯ್ದೆ ಕಲಂ 45ಬಿ ರನ್ವಯ 2004–05 ನೇ ಸಾಲಿನ ಆಸ್ತಿ ಮೌಲ್ಯ ನಿರ್ಧರಿಸಲು ಸಮಿತಿಗಳನ್ನು ರಚಿಸಿ ಆದೇಶ ಹೊರಡಿಸಲಾಗಿದೆ

ರಾಜ್ಯದಲ್ಲಿ ಕೃಷಿ ನೀರಾವರಿ ಸೌಲಭ್ಯಕ್ಕಾಗಿ ಬಳಸುವ ಐ ಪಿ ಸೆಟ್‌ಗಳಿಗೆ ವಿದ್ಯುತ್ ಸಂಪರ್ಕ ಒದಗಿಸುವ ಬಗ್ಗೆ

8 (185) ಶ್ರೀ ಆತ್ಮಾನಂದ ಎಂ ಎಸ್ (ಮಂಡ್ಯ) ಮಾನ್ಯ ಇಂಧನ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದಲ್ಲಿ ಕೃಷಿಗಾಗಿ ಉಪಯೋಗಿಸುವ ಪಂಪ್‌ಸೆಟ್‌ಗಳಿಗೆ ವಿದ್ಯುತ್ ಸಂಪರ್ಕ ನೀಡಲು, ಕೃಷಿಕರಿಂದ ಅರ್ಜಿಗಳನ್ನು ಸ್ವೀಕರಿಸುತ್ತಾ ಇಲ್ಲದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ಕೃಷಿಯ ಪಂಪ್‌ಸೆಟ್‌ಗಳಿಗೆ ವಿದ್ಯುತ್ ನೀಡಲು ನಿರ್ಬಂಧ ಇದೆಯೇ

ಆ) ಕೃಷಿಯಲ್ಲಿ ನೀರಾವರಿ ಸೌಲಭ್ಯಕ್ಕಾಗಿ ಐ ಪಿ ಸಟ್ ಗಳಿಗೆ ಹೊಸದಾಗಿ ಯಾವಾಗಿನಿಂದ ವಿದ್ಯುತ್ ಸಂಪರ್ಕ ಒದಗಿಸಲಾಗುವುದು?

ಶ್ರೀ ಬಸವರಾಜ್ ಪಾಟೀಲ್ (ಇಂಧನ ರಾಜ್ಯ ಸಚಿವರು)

ಅ) ಕೃಷಿ ಪಂಪ್‌ಸೆಟ್‌ಗಳಿಗಾಗಿ ವಿದ್ಯುತ್ ಸಂಪರ್ಕ ಕೋರಿ ಬರುವ ಅರ್ಜಿಗಳನ್ನು ಸ್ವೀಕರಿಸಲಾಗುತ್ತಿದೆ ಕಪ್ಪು ಹಾಗೂ ಬೂದು ತಾಲ್ಲೂಕುಗಳನ್ನು ಹೊರತು ಪಡಿಸಿ ನೀರಾವರಿ ಪಂಪುಸೆಟ್ಟುಗಳಿಗೆ ವಿದ್ಯುತ್ ಸಂಪರ್ಕ ನೀಡಲು ನಿರ್ಬಂಧ ಇರುವುದಿಲ್ಲ

ಆ) ಪ್ರಸ್ತುತ ನೀರಾವರಿ ಪಂಪ್‌ಸೆಟ್‌ಗಳಿಗೆ ಹೊಸದಾಗಿ ಸ್ವಯಂ ಪರಿವರ್ತಕ ಹೊಂದುವ ಯೋಜನೆ ಎಂಬ ಹೊಸ ಯೋಜನೆ (Own Your Transformer) ಅಡಿಯಲ್ಲಿ ವಿದ್ಯುತ್ ಸಂಪರ್ಕ ನೀಡಲಾಗುತ್ತಿದೆ

ಮಂಡ್ಯ ನಗರದಲ್ಲಿ ಕುಡಿಯುವ ನೀರಿನ ವಿತರಣಾ ವ್ಯವಸ್ಥೆಯ ಆಧುನೀಕರಣದ ಬಗ್ಗೆ

10 (187) ಶ್ರೀ ಎಂ ಎಸ್ ಆತ್ಮಾನಂದ (ಮಂಡ್ಯ) ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಮಂಡ್ಯ ನಗರದಲ್ಲಿನ ಪ್ರಸ್ತುತ ಕುಡಿಯುವ ನೀರಿನ ಯೋಜನೆಯಲ್ಲಿನ ವಿತರಣಾ ವ್ಯವಸ್ಥೆಯನ್ನು ಬಲಪಡಿಸಿ ಆಧುನೀಕರಣಗೊಳಿಸಬೇಕಾದ ಅವಶ್ಯಕತೆಯನ್ನು ಸರ್ಕಾರವು ಮನಗಂಡಿದೆಯೇ